ಶುಕ್ರವಾರ 24.10.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 79
Digital Varthe Kannada Daily
Volume 01 - Issue 79
Friday
24.10.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ
DIGITAL VARTHE
digitalvarthe@gmail.com
www.digitalvarthe.com

## ರಾಘವೇಂದ್ರ ಸ್ವಾಮಿ ಮಠದ ಬೀಗ ಮುರಿದು ಕಳ್ಳತನ



ಹಾವೇರಿ: ನಗರದಲ್ಲಿರುವ ರಾಘವೇಂದ್ರ ಸ್ವಾಮಿ ಮಠದಲ್ಲಿ ಕಳ್ಳರು ಬೀಗ ಮುರಿದು 10 ಲಕ್ಷಕ್ಕೂ ಅಧಿಕ ಮೌಲ್ಯದ ಚಿನ್ನಾಭರಣ ಕಳ್ಳತನ ಮಾಡಿದ್ದಾರೆ.

ನಗರದ ಹೃದಯ ಭಾಗದಲ್ಲಿರೋ ಮಠದಲ್ಲಿ ಎರಡು ಕೋಣೆಯ ಬೀಗ ಮುರಿದು ಕಳ್ಳತನ ಮಾಡಿದ್ದಾರೆ. ಮಠದಲ್ಲಿರೋ ಚಿನ್ನಾಭರಣ, ಬೆಳ್ಳಿಯ ಆಭರಣ, ಹಾಗೂ ತಾಮ್ರದ ವಸ್ತುಗಳನ್ನ ಖದೀಮರು ದೋಚಿ ಪರಾರಿಯಾಗಿದ್ದಾರೆ. ಸ್ಥಳಕ್ಕೆ ನಗರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

**ಕಳವಾದ ವಸ್ತುಗಳು**

1) 15 ಗ್ರಾಂ ಬಂಗಾರದ ಸರದ ಹುಕ್ಕು, 1,79,550 ರೂ. ಮೌಲ್ಯದ್ದು
2) 18 ಗ್ರಾಂ ಬಂಗಾರದ ಸರ, ಒಂದು ಹುಕ್ಕು, 2,15,460 ರೂ. ಮೌಲ್ಯದ್ದು
3) 06 ಗ್ರಾಂ ತೂಕದ ಬಂಗಾರದ ಸಣ್ಣ ಪುಷ್ಪ ಎಲೆ 71,820 ರೂ. ಮೌಲ್ಯದ್ದು
4) 2 ಬೆಳ್ಳಿಯ ತಂಬಿಗೆ, 6 ಬೆಳ್ಳಿಯ ಆಚುಮ್ಯ ಲೋಟ,
6) ಬೆಳ್ಳಿಯ ಉದ್ದರಣಿ, 2 ಬೆಳ್ಳಿಯ ತಟ್ಟೆಗಳು, 1 ಬೆಳ್ಳಿಯ ಆರತಿ ಇವುಳ, 2,70,920 ರೂ. ಮೌಲ್ಯದ್ದು
5) 75 ಕೆ.ಜಿ ರಥದ ಮೇಲಿನ ಹಿತ್ತಾಳೆಯ 03 ಕಳಸ, 1,00,00 ರೂ. ಮೌಲ್ಯದ್ದು
6) 60 ಕೆ.ಜಿ ಹಿತ್ತಾಳೆಯ 20 ಪಾತ್ರೆಗಳು, 42,000 ರೂ. ಮೌಲ್ಯದ್ದು
7) 18 ಕೆ.ಜಿ ತಾಮ್ರದ 50 ತಂಬಿಗಳು 17,928 ರೂ. ಮೌಲ್ಯದ್ದು
8) 207 ಕೆ.ಜಿ ಹಿತ್ತಾಳೆಯ 02 ಸಾಲು ದೀಪಗಳು, 42,000 ರೂ. ಮೌಲ್ಯದ್ದು
9) 40 ಕೆ.ಜಿ ಹಿತ್ತಾಳೆಯ 20 ಗಂಟೆಗಳು, 20,000 ರೂ. ಮೌಲ್ಯದ್ದು

ಒಟ್ಟು 10,67,668 ರೂ. ಮೌಲ್ಯದ ಆಭರಣ, ತಾಮ್ರದ ಮತ್ತು ಹಿತ್ತಾಳೆಯ ವಸ್ತುಗಳು ಕಳವಾಗಿದ್ದು, ಈ ಬಗ್ಗೆ ಡಾ. ವೀಣಾ ಎಸ್, ಶ್ರೀನಿವಾಸ ವೈದ್ಯ ದೂರು ನೀಡಿದ್ದಾರೆ. ದೂರು ದಾಖಲಿಸಿಕೊಂಡಿರುವ ಹಾವೇರಿ ನಗರ ಪೊಲೀಸ್ ಠಾಣೆಯ ಅಧಿಕಾರಿಗಳು ಕಳ್ಳರ ಪತ್ತೆಗೆ ಬಲೆ ಬೀಸಿದ್ದಾರೆ.

## ಲ್ಯಾಂಡಿಂಗ್ ವೇಳೆ ಹೂತು ಹೋಯ್ತು ಮುರ್ಮು ಅವರ ಹೆಲಿಕಾಪ್ಟರ್



ತಿರುವನಂತಪುರಂ: ಲ್ಯಾಂಡಿಂಗ್ ವೇಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹೆಲಿಕಾಪ್ಟರ್ ಚಕ್ರ ಹೂತುಹೋದ ಘಟನೆ ನಡೆದಿದೆ.

ಶಬರಿಮಲೆಗೆ ಭೇಟಿ ನೀಡುವ ಸಲುವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾರತೀಯ ವಾಯುಸೇನೆಯ ಎಂಐ -17 ಹೆಲಿಕಾಪ್ಟರ್‌ನಲ್ಲಿ ತಿರುವನಂತ ಪುರಂನಿಂದ ತೆರಳಿದ್ದರು.

ಬೆಳಗ್ಗೆ ಪ್ರಮಾಡಂ ಇನ್ ಡೋರ್ ಸ್ಟೇಡಿಯಂನಲ್ಲಿ ಲ್ಯಾಂಡಿಂಗ್ ಆಗುವಾಗ ಹೆಲಿಕಾಪ್ಟರ್ ಚಕ್ರ ನೆಲದಲ್ಲಿ ಹೂತು ಹೋಗಿತ್ತು. ಬಳಿಕ ಪೊಲೀಸ್, ಅಗ್ನಿಶಾಮಕ ಸಿಬ್ಬಂದಿ ಸೇರಿ ಹೆಲಿಕಾಪ್ಟರ್ ತಳ್ಳಿ ಬದಿಗೆ ಸರಿಸಿದ್ದಾರೆ.

ಪೂರ್ವನಿಗದಿ ಪ್ರಕಾರ ಇಂದು ರಾಷ್ಟ್ರಪತಿಗಳು ನೀಲಕ್ಕಲ್‌ನಲ್ಲಿ ಲ್ಯಾಂಡ್ ಆಗಬೇಕಿತ್ತು. ಆದರೆ ಹವಾಮಾನ ವೈಪರೀತ್ಯ ಹಿನ್ನೆಲೆಯಲ್ಲಿ ಪ್ರಮಾಡಂ ಇನ್ ಡೋರ್ ಸ್ಟೇಡಿಯಂ ಬಳಿ ಇಂದು ಹೆಲಿಕಾಪ್ಟರ್ ಅನ್ನು ಲ್ಯಾಂಡ್ ಮಾಡಿಸಲಾಯ್ತು.

ಕೊನೆಯ ಕ್ಷಣದಲ್ಲಿ ಪ್ರಮಾಡಂ ಜಾಗ ನಿಗದಿ ಮಾಡಿದ್ದರಿಂದ ಮಂಗಳವಾರ ತಡರಾತ್ರಿ, ಹೆಲಿಪ್ಯಾಡ್ ನಿರ್ಮಾಣ ಮಾಡಲಾಗಿತ್ತು. ತೂಕದ ಕಾರಣಕ್ಕೆ ಹೆಲಿಕಾಪ್ಟರ್ ಚಕ್ರ ಹೂತು ಹೋಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಹೆಲಿಕಾಪ್ಟರ್‌ನಿಂದ ಇಳಿದ ಬಳಿಕ ರಾಷ್ಟ್ರಪತಿಗಳು ಕಾರಿನಲ್ಲಿ ಕುಳಿತು ಶಬರಿಮಲೆಗೆ ಪ್ರಯಾಣಿಸಿದರು.

## ಆಸ್ತಿ ಆಸೆಗೆ ತಂದೆ ಸತ್ತು 3 ದಿನಗಳಾದರೂ ಶವದ ಅಂತ್ಯಕ್ರಿಯೆ ಮಾಡದ ಪಾಪಿ ಪುತ್ರರು.!



ಆಂಧ್ರಪ್ರದೇಶದ ಪಲ್ನಾಡು ಜಿಲ್ಲೆಯಲ್ಲಿ ನಡೆದ ಅಮಾನವೀಯ ಘಟನೆಯು ಸಮಾಜವನ್ನು ಆಘಾತಕ್ಕೀಡು ಮಾಡಿದೆ. ತಂದೆಯ ಸಾವಿನ ನಂತರ ಮೂರು ದಿನಗಳ ಕಾಲ ಅಂತ್ಯಸಂಸ್ಕಾರ ನಿರ್ವಹಿಸದೆ, ಶವವನ್ನು ಮನೆ ಮುಂದೆಯೇ ಬಿಟ್ಟಿಟ್ಟ ಪುತ್ರರ ವರ್ತನೆಯು ಸಂಬಂಧಿಕರಲ್ಲಿ ಕೋಪವನ್ನುಂಟು ಮಾಡಿದೆ. ಆಸ್ತಿ ಹಂಚಿಕೆಯ ವಿವಾದದಿಂದಾಗಿ ಇಂತಹ ನಿರ್ದಯತೆ ನಡೆದಿದ್ದು, ಪೊಲೀಸ್ ಮಧ್ಯಪ್ರವೇಶದಿಂದ ಮಾತ್ರ ಅಂತ್ಯಕ್ರಿಯೆ ನಡೆದಿದೆ. ಈ ಘಟನೆಯು ಕುಟುಂಬದಲ್ಲಿ ಆಸ್ತಿ ವಿವಾದಗಳ ಅಂತ್ಯವಿಲ್ಲದ ದುಷ್ಪರಿಣಾಮಗಳನ್ನು ಮತ್ತೊಮ್ಮೆ ಮುಂದಿರಿಸಿದೆ.

ಪಲ್ನಾಡು ಜಿಲ್ಲೆಯ ಯೆಡ್ಡಪಾಡು ಮಂಡಲದ ಪಾಟಾ ಸೋಲಾಸಾ ಗ್ರಾಮದಲ್ಲಿ ನೆರೆಸಿದ್ದ 80 ವರ್ಷದ ಹಿರಿಯ ಆಂಜನೇಯುಲು ಅವರು ಮೂರು ದಿನಗಳ ಹಿಂದೆ ಅನಾರೋಗ್ಯದಿಂದ ನಿಧನರಾದರು. ಅವರ ಮರಣದ ನಂತರ, ಗಂಡು ಮತ್ತು ಹೆಣ್ಣು ಮಕ್ಕಳ ನಡುವೆ ಆಸ್ತಿ ಹಂಚಿಕೆಯ ಬಗ್ಗೆ ತೀವ್ರ ವಿವಾದ ಉಂಟಾಯಿತು. ಈ ವಿವಾದದ ಪರಿಣಾಮವಾಗಿ, ಇಬ್ಬರು ಗಂಡು ಮಕ್ಕಳು ತಂದೆಯ ಅಂತ್ಯಸಂಸ್ಕಾರ ನಿರ್ವಹಿಸಲು ನಿರಾಕರಿಸಿದರು.

ಆಂಜನೇಯುಲು ಅವರ ದೇಹವು ಮೂರು ದಿನಗಳ ಕಾಲ ಮನೆಯ ಮುಂದಿನ ನೆಲದ ಮೇಲೆಯೇ ಇತ್ತು. ಮಳೆ ಬಂದರೂ, ಬೆಳಕು ಬಂದರೂ, ಯಾವುದೇ ರಕ್ಷಣೆಯಿಲ್ಲದೆ ಶವವು ಅಲ್ಲಿಯೇ ಕೊರಳಾಗಿತ್ತು. ಸಂಬಂಧಿಕರು ಮತ್ತು ಗ್ರಾಮಸ್ಥರು ಎಷ್ಟೇ ಸಲಹೆ ನೀಡಿದರೂ, ಪುತ್ರರು ಕಿವುಗಟ್ಟಲಿಲ್ಲ. "ಆಸ್ತಿ ಹಂಚಿಕೆಯ ವಿಷಯ ತೀರ್ಮಾನವಾಗದ ಹೊರತು, ಅಂತ್ಯಕ್ರಿಯೆ ಮಾಡುವುದಿಲ್ಲ" ಎಂದು ಅವರು ಹೇಳಿದರು. ಈ ಘಟನೆಯ ಸುದ್ದಿ ಗ್ರಾಮದಲ್ಲಿ ಹಬ್ಬಿದ್ದು, ಸ್ಥಳೀಯರು ಸಂಬಂಧಿಕರ ಮೇಲೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. "ಇಂತಹ ನಿರ್ದಯತೆಯನ್ನು ನಾವು ಎಂದಿಗೂ ನೋಡಿಲ್ಲ. ತಂದೆಯ ಶವವನ್ನು ಚೆಲ್ಲಿ, ಆಸ್ತಿಯ ಮೇಲೆ ಹೋರಾಡುವುದು ಎಂದು ಗ್ರಾಮಸ್ಥರು ಕೂಗಾಡಿದರು.

ವಿಷಯ ತಿಳಿದುಬಂದ ತಕ್ಷಣ, ಸ್ಥಳೀಯ ಪೊಲೀಸರು ಘಟನಾ ಸ್ಥಳಕ್ಕೆ ಧಾವಿಸಿದರು. ಆಂಜನೇಯುಲು ಅವರ ಮೃತದೇಹದ ಬಳಿ ಬಂದು, ಕುಟುಂಬ ಸದಸ್ಯರನ್ನು ಎಚ್ಚರಿಕೆ ಮಾಡಿದರು. "ಇದು ಕಾನೂನುಬಾಹಿರ ಮತ್ತು ಮಾನವೀಯತೆಗೆ ವಿರುದ್ಧ. ತಕ್ಷಣ ಅಂತ್ಯಸಂಸ್ಕಾರ ನಡೆಸಿ" ಎಂದು ಪೊಲೀಸರು ಎಚ್ಚರಿಸಿದರು. ಈ ಮಧ್ಯಪ್ರವೇಶದಿಂದ ಕುಟುಂಬ ಸದಸ್ಯರು ಒಪ್ಪಿಕೊಂಡು, ಆಂಜನೇಯುಲು ಅವರ ಅಂತ್ಯಕ್ರಿಯೆಯನ್ನು ನೆರವೇರಿಸಿದರು. ಆದರೂ, ಆಸ್ತಿ ವಿವಾದವು ಇನ್ನೂ ತೀರದೇ ಇದ್ದು, ಕುಟುಂಬದಲ್ಲಿ ತುಂಬಾ ಒಡನಾಟ ಕಡಿಮೆಯಾಗಿದೆ.

ಈಘಟನೆಯು ಆಂಧ್ರ ಪ್ರದೇಶದ ಇತರ ಭಾಗಗಳಲ್ಲೂ ಚರ್ಚೆಗೆ ಗ್ರಾಸವಾಗಿದ್ದು, ಸಾಮಾಜಿಕ ಮಾಧ್ಯಮಗಳಲ್ಲಿ "ಆಸ್ತಿಯ ಆಸೆಯಿಂದ ಕುಟುಂಬ ಬಂಧಗಳು ಕರಗುತ್ತಿವೆ" ಎಂಬ ಟೀಕೆಗಳು ಎಲ್ಲೆಡೆ ಕೇಳಿಬರುತ್ತಿವೆ. ಇಂತಹ ವಿವಾದಗಳು ಹೆಚ್ಚುತ್ತಿರುವುದು ಕುಟುಂಬ ನ್ಯಾಯಾಲಯಗಳಲ್ಲಿ ಪ್ರಕರಣಗಳ ಸಂಖ್ಯೆಯನ್ನು ಹೆಚ್ಚಿಸಿದೆ. ತಜ್ಞರು ಸಲಹೆ ನೀಡುವಂತೆ, ಆಸ್ತಿ ಹಂಚಿಕೆಯ ವಿಷಯಗಳನ್ನು ಮುಂಗಾರುವೇ ಚರ್ಚಿಸಿ, ಕಾನೂನು ಸಲಹೆ ಪಡೆಯುವುದು ಮುಖ್ಯ. ಇಲ್ಲದಿದ್ದರೆ, ಇಂತಹ ದುರಂತಗಳು ಮುಂದುವರಿಯಬಹುದು.

## ಸಿದ್ದರಾಮಯ್ಯ ಉತ್ತರಾಧಿಕಾರಿ ಸತೀಶ್: ಯತೀಂದ್ರ




**ಬೆಂಗಳೂರು:** ರಾಜ್ಯದಲ್ಲಿ ನವೆಂಬರ್ ಕ್ರಾಂತಿಯ ವಿಚಾರ ಭಾರಿ ಚರ್ಚೆಯಲ್ಲಿದೆ. ಈ ನಡುವೆ ಸಿಎಂ ಸಿದ್ದರಾಮಯ್ಯ ಪುತ್ರ ಯತೀಂದ್ರ ನೀಡಿರುವ ಉತ್ತರಾಧಿಕಾರಿ ಹೇಳಿಕೆ ರಾಜ್ಯ ರಾಜಕೀಯದಲ್ಲಿ, ಅದರಲ್ಲೂ ಆಡಳಿತಾರೂಢ ಕಾಂಗ್ರೆಸ್ ಪಾಳಯದಲ್ಲಿ ಸಂಚಲನ ಮೂಡಿಸಡಿದೆ. ಮುಖ್ಯಮಂತ್ರಿ ಸ್ಥಾನದ ಮೇಲೆ ಕಣ್ಣಿಟ್ಟಿರುವ ಡಿಸಿಎಂ ಡಿಕೆಶಿ ಒಂದೆಡೆ ಟೆಂಪಲ್ ರನ್ ನಡೆಸುತ್ತಿದ್ದರೆ, ಇತ್ತ ಸಿದ್ದರಾಮಯ್ಯ ಬಣ ಬೇರೆಯದ್ದೇ ತಂತ್ರ ಹೆಣೆಯುತ್ತಿದೆಯಾ ಎಂಬ ಅನುಮಾನ ಮೂಡಿಸಿದೆ. ಈ ಬಗ್ಗೆ ಪರ ವಿರೋಧ ಚರ್ಚೆಗಳು 'ಕೈ' ಪಾಳಯದಲ್ಲೇ ಆರಂಭಗೊಂಡಿವೆ.

ಯತೀಂದ್ರ ಹೇಳಿಕೆಗೆ ಪ್ರತಿಕ್ರಿಯಿಸಿರೋ ಸಚಿವ ಸತೀಶ್ ಜಾರಕಿಹೊಳಿ, ನಾನು ಸಿದ್ದರಾಮಯ್ಯನವರ ಉತ್ತರಾಧಿಕಾರಿ ಅಂತಾ ಹೇಳಲ್ಲ. ಅದನ್ನು ಜನರು ಹಾಗೂ ಪಕ್ಷ ಹೇಳಬೇಕು ಎಂದಿದ್ದಾರೆ. ಸಿದ್ದರಾಮಯ್ಯ ಪುತ್ರ ಯತೀಂದ್ರ ತಮ್ಮ ಅಭಿಪ್ರಾಯ ಹೇಳಿದ್ದಾರೆ. ಕಾಂಗ್ರೆಸ್‌ನಲ್ಲಿ ಅರಸು ನಂತರ ಬಂಗಾರಪ್ಪ ಬಳಿಕ ಸಿದ್ದರಾಮಯ್ಯ ಇದ್ದಾರೆ. ಅವರ ಬಳಿಕ ಯಾರೆಂದು ಮುಂದೆ ಉತ್ತರ ಸಿಗುತ್ತದೆ. ಆದರೆ 2028ಕ್ಕೆ ಕ್ಲೈಮ್ ಮಾಡೋದ್ರಲ್ಲಿ ನಾನೂ ಇದೀನಿ ಎಂದು ಸತೀಶ್ ಹೇಳಿರೋದು ಭಾರಿ ಕುತೂಹಲ ಮೂಡಿಸಿದೆ. ಯತೀಂದ್ರ ಸಿದ್ದರಾಮಯ್ಯ ಹೇಳಿಕೆಯನ್ನ ಗೃಹ ಸಚಿವ ಪರಮೇಶ್ವರ್ ಸೇರಿ ಹಲವು ಕಾಂಗ್ರೆಸ್ ನಾಯಕರು ಬೆಂಬಲಿಸಿದ್ದಾರೆ. ಸಿದ್ದರಾಮಯ್ಯರು ಅಹಿಂದ ಪ್ರಾರಂಭಿಸಿದಾಗ ಸತೀಶ್ ಜಾರಕಿಹೊಳಿಯವರು ಪ್ರಮುಖ ಪಾತ್ರ ವಹಿಸಿದ್ದರು. ಆ ಹಿನ್ನೆಲೆಯಲ್ಲಿ ಅವರ ಹೆಸರು ಹೇಳಿದರೆ ತಪ್ಪೇನಿದೆ? ಎಂದು ಪರಮೇಶ್ವರ್ ಪ್ರಶ್ನಿಸಿದ್ದಾರೆ. ಯತೀಂದ್ರ ಹೇಳಿರುವ ನಾಯಕತ್ವ ಸತೀಶ್ ಜಾರಕಿಹೊಳಿ ಅವರಲ್ಲಿದ್ದು, ಒಂದಲ್ಲ ಒಂದು ದಿನ ಅವರು ಸಿಎಂ ಆಗ್ತಾರೆ. ಎಲ್ಲರನ್ನೂ ಜೊತೆಗೆ ತೆಗೆದುಕೊಂಡು, ಸಿಎಂ ಸಿದ್ದರಾಮಯ್ಯನವರ ದಾರಿಯಲ್ಲೇ ಸತೀಶ್ ಸಾಗುತ್ತಿದ್ದಾರೆ ಎಂದು ಅಬಕಾರಿ ಸಚಿವ R.B. ತಿಮ್ಮಾಪುರ ಹೇಳಿದ್ದಾರೆ.

ಡಿಕೆಶಿ ಬಣದ ಶಾಸಕರು ಮಾತ್ರ ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ವಿರುದ್ಧ ಕಿಡಿ ಕಾರಿದ್ದಾರೆ. ಯತೀಂದ್ರ ಹೇಳಿಕೆ ಒಂದು ರೀತಿ ಎಳಸು ಸ್ಟೇಟ್‌ಮೆಂಟ್ ಅಂತಾ ರಾಮನಗರದಲ್ಲಿ ಶಾಸಕ ಇಕ್ಬಾಲ್ ಹುಸೇನ್ ತಿರುಗೇಟು ನೀಡಿದ್ದು, ಈ ರೀತಿಯ ಹೇಳಿಕೆಗಳನ್ನು ಕೊಡಬಾರದು ಎಂದಿದ್ದಾರೆ. ದೊಡ್ಡ ಮನೆತನ, ದೊಡ್ಡ ಸ್ಥಾನದಲ್ಲಿ ಇರುವ ನೀವು ತಾವಾಗಿ ಕೆಳಗೆ ಬೀಳೋದು ನಮಗೆ ಇಷ್ಟವಿಲ್ಲ. ನೀವು ಗೌರವಯುತವಾಗಿ ಹೇಳಿಕೆಗಳನ್ನ ಕೊಡಬೇಕು. ನಿಮ್ಮ ಮಾತಿನಲ್ಲಿ ಶಕ್ತಿ ಇಲ್ಲ ಎಂದು ಆರೋಪಿಸಿದ್ದಾರೆ. ಇನ್ನು ಈ ವಿಚಾರವಾಗಿ ಕೆಪಿಸಿಸಿಯಿಂದ ಯತೀಂದ್ರಗೆ ನೊಟೀಸ್ ನೀಡದ ಬಗ್ಗೆಯೂ ಆಕ್ರೋಶ ಹೊರ ಹಾಕಿರುವ ಇಕ್ಬಾಲ್, ನಾವು ಮಾಡಿದ್ರೆ ಬಲಾತ್ಕಾರ, ಬೇರೆಯವರು ಮಾಡಿದ್ರೆ ಚಮತ್ಕಾರ ಅನ್ನೋ ಪರಿಸ್ಥಿತಿ ಇದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

## ಡಾ.ಕೃತಿಕಾರೆಡ್ಡಿ ಕೊಲೆ ಕೇಸ್: ತಪ್ಪೊಪ್ಪಿಕೊಂಡ ಪತಿ



ಡಾ. ಕೃತಿಕಾರೆಡ್ಡಿ ಕೊಲೆ ಪ್ರಕರಣ ಸಂಬಂಧ ಆರೋಪಿ, ಪತಿ ಡಾ.ಮಹೇಂದ್ರರೆಡ್ಡಿ ಪೊಲೀಸರ ಮುಂದೆ ಕೊನೆಗೂ ತಪ್ಪೊಪ್ಪಿಕೊಂಡಿದ್ದಾನೆ. ಇದರ ಜೊತೆಗೆ ತನಿಖೆ ವೇಳೆ ಕೆಲ ಸ್ಫೋಟಕ ಅಂಶಗಳು ಬೆಳಕಿಗೆ ಬಂದಿವೆ. ಕೊಲೆ ಹಿಂದಿನ ಕಾರಣ ಮತ್ತು ಅದಕ್ಕಾಗಿ ಆರೋಪಿಯ ಪ್ಲ್ಯಾನ್ ಹೇಗಿತ್ತು ಎಂಬುದನ್ನೀಗ ಪೊಲೀಸರು ಬಹಿರಂಗಗೊಳಿಸಿದ್ದಾರೆ. ಡಾ. ಕೃತಿಕಾರೆಡ್ಡಿಯದ್ದು ಸಹಜ ಸಾವು ಎಂದು ಬಿಂಬಿಸದರೆ ಮೃತ ದೇಹದ ಮರಣೋತ್ತರ ಪರೀಕ್ಷೆ ಮಾಡುವುದಿಲ್ಲ. ಹೀಗಾಗಿ ಸಾವಿಗೆ ಅಸಲಿ ಕಾರಣ ಏನೆಂಬುದು ಗೊತ್ತಾಗಲ್ಲ ಎಂಬುದು ಡಾ. ಮಹೇಂದ್ರ ರೆಡ್ಡಿಯ ಪ್ಲ್ಯಾನ್ ಆಗಿತ್ತು.

ಡಾ.ಕೃತಿಕಾರೆಡ್ಡಿಗೆ ಇದ್ದ ಆರೋಗ್ಯ ಸಮಸ್ಯೆಯಿಂದ ಪತಿ ಡಾ. ಮಹೇಂದ್ರರೆಡ್ಡಿ ಬೇಸತ್ತಿದ್ದ. ತನಗೆ ವೈಯಕ್ತಿಕ ಜೀವನ ಇಲ್ಲ ಎಂದು ಕೋಪಕೊಂಡಿದ್ದ. ಹೀಗಂತಾ ವಿಚ್ಛೇದನ ಪಡೆದರೆ ತನಗೆ ಏನು ಸಿಗಲ್ಲ ಎಂಬುದು ಆರೋಪಿಗೆ ಗೊತ್ತಿತ್ತು. ಹಾಗಾಗಿ ಹೆಂಡತಿಯ ಆರೋಗ್ಯ ಸಮಸ್ಯೆಯನ್ನೇ ಬಂಡವಾಳವಾಗಿ ಮಾಡಿಕೊಂಡು ಕೊಲೆ ಮಾಡಿ ಅದನ್ನು ಸಹಜ ಸಾವು ಎಂದು ಬಿಂಬಿಸಲು ಯೋಜನೆ ಸಿದ್ಧಪಡಿಸಿದ್ದ. ಇದರ ಭಾಗವಾಗಿ ಡಾ.ಕೃತಿಕಾಗೆ ಅನಸ್ತೇಶಿಯಾ ಕೊಟ್ಟಿದ್ದ. ಆಕೆಯ ದೇಹದ ತೂಕಕ್ಕೆ ಕೇವಲ ಏಳರಿಂದ ಎಂಟು ಎಂ. ಎಲ್. ಅನಸ್ತೇಶಿಯಾ ನೀಡಬಹುದಾಗಿತ್ತು.

ಇದು ಗೊತ್ತಿದ್ದರೂ ಆ ದಿನ ಹದಿನೈದು ಎಂ.ಎಲ್. ನೀಡಿದ್ದ ಎಂಬುದು ವೈಜ್ಞಾನಿಕ ಸಾಕ್ಷಿಗಳಿಂದ ದೃಢಪಟ್ಟಿವೆ.

ಪ್ರಕರಣ ಸಂಬಂಧ ಬಂಧಿತ ಆರೋಪಿ ಡಾ.ಮಹೇಂದ್ರರೆಡ್ಡಿಯ ಮೊಬೈಲ್ ನ ಡಾಟಾ ಕೂಡ ಪೊಲೀಸರು ರಿಟ್ರೀವ್ ಮಾಡಿದ್ದು, ಈ ವೇಳೆ ಹಲವು ಮಹತ್ವದ ಸಾಕ್ಷಿಗಳು ದೊರೆತಿವೆ. ಎಂದು ಆರೋಪಿ ಸಂದೇಶ ಕಳುಹಿಸಿದ್ದ ಬಗ್ಗೆ ಗೊತ್ತಾಗಿದೆ. ಹೆಂಡತಿ ಸಾಯಬೇಕು, ಆದರೆ ತಾನು ಕೆಟ್ಟವನಾಗಬಾರದು. ಆಸ್ತಿಯೂ ಕೈತಪ್ಪಿ ಹೋಗಬಾರದು ಎಂಬುದು ಆರೋಪಿಯ ಪ್ಲ್ಯಾನ್ ಆಗಿತ್ತು. ಇದಕ್ಕಾಗಿ ಅಗತ್ಯ ಸಿದ್ಧತೆ ಮಾಡಿಕೊಂಡೇ ಡಾ. ಮಹೇಂದ್ರ ರೆಡ್ಡಿ ಕೃತ್ಯ ಎಸಗಿದ್ದ ಎಂಬುದು ಗೊತ್ತಾಗಿದೆ. ಇದರ ಜೊತೆಗೆ ಪ್ರೋಫಾಪಾಲ್ ಖರೀದಿ ಮಾಡಿದ್ದಕ್ಕೆ ಸಾಕ್ಷಿ, ಇಂಜೆಕ್ಷನ್ ಕೊಟ್ಟಿದ್ದಕ್ಕೆ ಕ್ಯಾನ್ ಮತ್ತು ಮೃತ ದೇಹದಲ್ಲಿ ಅರವಳಿಕೆ ಅಂಶ ಪತ್ತೆ ಸೇರಿ ಕೊಲೆ ಮಾಡಿರುವ ಬಗ್ಗೆ ಓರ್ವರ ಜೊತೆ ಚಾಟ್ ಮಾಡಿರುವ ಸಂಗತಿ ಪೊಲೀಸರು ಬಟಾಬಯಲು ಮಾಡಿದ್ದಾರೆ.

## ಗೆಳತಿಯ ಬಟ್ಟೆ ಬದಲಿಸುವ ವಿಡಿಯೋ ಚಿತ್ರೀಕರಿಸಿದ ಯುವತಿ ಅರೆಸ್ಟ್

**ಮಂಗಳೂರು:** ಒಂದೇ ಮನೆಯಲ್ಲಿ ವಾಸವಿದ್ದ ಸಂದರ್ಭದಲ್ಲಿ, ಯುವತಿಯರಿಬ್ಬರ ಖಾಸಗಿ ವಿಡಿಯೊವನ್ನ ಇನ್ನೊಬ್ಬಾಕೆ ಚಿತ್ರೀಕರಿಸಿ, ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡ ಆರೋಪದ ಮೇಲೆ ಯುವತಿಯೊಬ್ಬಳನ್ನ ಕದ್ರಿ ಠಾಣೆಯ ಪೊಲೀಸರು ಬಂಧಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಕಲಶದ ನಿರೀಕ್ಷಾ ಬಂಧಿತ ಯುವತಿ. ಮಂಗಳೂರಿನ ಕುದ್ರೋಳಿಗುಡ್ಡೆಯ ಬಾಡಿಗೆ ಮನೆಯೊಂದರಲ್ಲಿ ಗೆಳತಿ ಜೊತೆ ವಾಸವಿದ್ದ ನಿರೀಕ್ಷಾ ಉದ್ಯೋಗ ಮಾಡಿಕೊಂಡಿದ್ದಳು. ಈ ವೇಳೆ ಗೆಳತಿಯ ಖಾಸಗಿ ದೃಶ್ಯವನ್ನ ವಿಡಿಯೊ ಮಾಡಿಟ್ಟುಕೊಂಡಿದ್ದಳು. ಆ ವಿಡಿಯೊ ಈಚೆಗೆ ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡಿತ್ತು.

ಯುವತಿಯರು ಬಟ್ಟೆ ಬದಲಿಸುವ ವಿಡಿಯೋ ಮಾಡಿಟ್ಟುಕೊಂಡಿದ್ದ ಆರೋಪಿ ನಿರೀಕ್ಷಾ ಉಡುಪಿ ಜಿಲ್ಲೆಯ ಕಾರ್ಕಳ ನಿವಾಸಿ ಅಭಿಷೇಕ್ ಎಂಬಾತನಿಗೆ ಕಳುಹಿಸಿದ್ದಳಂತೆ. ಅಭಿಷೇಕ್ ಮಂಗಳೂರಿನ ಸರ್ಕಾರಿ ಆಸ್ಪತ್ರೆಯಲ್ಲಿ ಲ್ಯಾಬ್ ಟೆಕ್ನಿಶಿಯನ್ ಆಗಿದ್ದ. ಆದ್ರೆ ಕಳೆದ ಅಕ್ಟೋಬರ್ 9ರಂದು ಕಾರ್ಕಳದಲ್ಲಿ ಅಭಿಷೇಕ್ ಸುಧೀರ್ಘ ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದ. ಡೆತ್‌ನೋಟ್‌ನಲ್ಲಿ ನಿರೀಕ್ಷಾ ಹಾಗೂ ಇತರರ ವಿರುದ್ಧ ಮೃತ ಅಭಿಷೇಕ್ ಹನಿಟ್ರ್ಯಾಪ್ ಆರೋಪ ಮಾಡಿದ್ದ.

ನಿರೀಕ್ಷಾ ತನ್ನ ರೂಮಿನಲ್ಲಿದ್ದ ಇಬ್ಬರು ಯುವತಿಯರ ವಿಡಿಯೋ ಮಾಡಿ ವೈರಲ್ ಮಾಡಿದ್ದ ಬಗ್ಗೆಯೂ ಡೆತ್ ನೋಟ್ ನಲ್ಲಿ ಉಲ್ಲೇಖಿಸಿದ್ದ. ಸಾಯುವ ಮುನ್ನ truth group ಹೆಸರಿನ ವಾಟ್ಸಪ್ ಗ್ರೂಪ್ ಮಾಡಿ ಅದರಲ್ಲಿ ಕೆಲ ವಿಡಿಯೋಗಳನ್ನೂ ಹರಿಬಿಟ್ಟಿದ್ದ. ಅದರಲ್ಲಿ ಈ ಇಬ್ಬರ ಯುವತಿಯರ ವಿಡಿಯೋ ಕೂಡ ಇದ್ದ ಹಿನ್ನೆಲೆ ಕದ್ರಿ ಠಾಣೆಗೆ ಸಂತ್ರಸ್ತೆಯರು ದೂರು ನೀಡಿದ್ದರು.

ಒಂದು ವರ್ಷದ ಹಿಂದೆಯೇ ವಿಡಿಯೋ ಮಾಡಿರುವ ಸಾಧ್ಯತೆಗಳಿದೆ ಎನ್ನಲಾಗಿದೆ. ಸದ್ಯ ನಿರೀಕ್ಷಾಳನ್ನು ಬಂಧಿಸಿರುವ ಕದ್ರಿ ಪೊಲೀಸರು ಬಿಎನ್ ಎಸ್ 77, 78(2), 294(2)(A) ಅಡಿ ದಾಖಲಾಗಿದ್ದ ಪ್ರಕರಣ ದಾಖಲಿಸಿದ್ದಾರೆ. ಅತ್ತ ಉಡುಪಿಯ ಕಾರ್ಕಳ ಪೊಲೀಸರು ಈಗಾಗಲೇ ಅಭಿಷೇಕ್ ಆತ್ಮಹತ್ಯೆಗೆ ಸಂಬಂಧಿಸಿದಂತೆ ತನಿಖೆ ನಡೆಸುತ್ತಿದ್ದಾರೆ.

## ಭಾರೀ ಮಳೆಗೆ ಉರುಳಿ ಬಿದ್ದ ಮನೆಯ ಬ್ರಹತ್ ಗೋಡೆ




**ಕೃಷ್ಣರಾಜಪೇಟೆ:** ತಾಲ್ಲೂಕಿನ ನಾರ್ಗೋನಹಳ್ಳಿ ಗ್ರಾಮದಲ್ಲಿ ವಾಸವಾಗಿರುವ ಮಾದಿಗ ಸಮಾಜದ ಮುಖಂಡರಾದ ನಿವೇದಿತಾ ಮತ್ತು ಆಟೋ ಮಂಜು ಅವರು ವಾಸವಾಗಿದ್ದ ಮನೆಯು ಭಾರೀ ಮಳೆಗೆ ನೆಲಕ್ಕುರುಳಿದೆ.

ಆಟೋ ಮಂಜು ದಂಪತಿಗಳು ಈ ಮನೆಯಲ್ಲಿ ವಾಸವಾಗಿದ್ದರು. ಸರಿ ಸುಮಾರು ರಾತ್ರಿ 12.30ರ ಸಮಯದಲ್ಲಿ ಭಾರೀ ಮಳೆಗೆ ಏಕಾಏಕಿ ಮನೆಯ ಒಂದು ಭಾಗ ಸಂಪೂರ್ಣವಾಗಿ ನೆಲಕ್ಕೂರುಳಿದರೂ ಅಲ್ಲಿಯೇ ಮಲಗಿದ್ದ ನಿವೇದಿತಾ ಮತ್ತು ಮಂಜು ರವರು ಕೂಡಲೆಳೆಯ ಅಂತರದಲ್ಲಿ ಪಾರಾಗಿದ್ದಾರೆ. ಮಂಜು ರವರು ಆಟೋ ಒಡಿಸುವ ಮೂಲಕ ಜೀವನ ಮಾಡುತ್ತಿದ್ದರೆ, ಅದರಲ್ಲೂ ಜೀವನಾವಶ್ಯಕ ವಸ್ತುಗಳು ಸೇರಿದಂತೆ ಮನೆಯಲ್ಲಿದ್ದ ಪಡಿತರ ಪದಾರ್ಥಗಳು ದವಸ ಧಾನ್ಯಗಳು ಸಂಪೂರ್ಣವಾಗಿ ನಾಶವಾಗಿದೆ. ಬಾರಿ ಮಳೆಯಿಂದ ಇದ್ದ ಮನೆಯನ್ನು ಕಳೆದುಕೊಂಡು ಬೀದಿಗೆ ಬಿದ್ದಿರುವ ಈ ಬಡ ಕುಟುಂಬ ಪರದಾಡುವಂತಾಗಿದೆ. ಈ ಕೂಡಲೇ ಸಂಭಂಧ ಪಟ್ಟ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ತಾಲೂಕು ದಂಡಾಧಿಕಾರಿಗಳು ಸೇರಿದಂತೆ ಸಂಬಂಧಪಟ್ಟ ಗ್ರಾಮ ಆಡಳಿತ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಮಳೆ ಅವಘಡದಲ್ಲಿ ನೊಂದಿರುವ ಕುಟುಂಬಕ್ಕೆ ಸಹಾಯ ಮಾಡಬೇಕೆಂದು ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಎನ್. ಎಸ್. ಸ್ವಾಮಿ ರವರು ಮನವಿ ಮಾಡಿದ್ದಾರೆ.

ಇದೇ ಸಂಧರ್ಭದಲ್ಲಿ ಆಟೋ ಮಂಜು, ನಿವೇದಿತಾ, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಎನ್. ಎಸ್ . ಸ್ವಾಮಿ, ವಸಂತ, ಪವಿತ್ರ, ಚಂದ್ರ, ಪುಟ್ಟರಾಜು, ನಾಗರಾಜ್, ಸುಮಿತ್ರಾ, ಗೀತಾ

## ಪೋಕ್ಸೋ ಕೇಸ್‌ನಲ್ಲಿ ಬಿಎಸ್ ಯಡಿಯೂರಪ್ಪ



**ಬೆಂಗಳೂರು,** ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧದ ಪೋಕ್ಸೋ ಕೇಸ್ ರದ್ಧತಿ ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಕರ್ನಾಟಕ ಹೈಕೋರ್ಟ ಪೀಠ ಆದೇಶವನ್ನು ಕಾಯ್ದಿರಿಸಿದೆ. ಯಡಿಯೂರಪ್ಪ ಪರ ಹಿರಿಯ ವಕೀಲ ಸಿವಿ ನಾಗೇಶ್ ವಾದ ಮಂಡನೆ ಮಾಡಿದ್ದಾರೆ. ಹೈಕೋರ್ಟ್ ನ್ಯಾಯಮೂರ್ತಿ ಎಂಐ ಅರುಣ್ ಅವರಿಂದ ಪೀಠ ವಿಚಾರಣೆ ನಡೆಸಿ, ಆದೇಶವನ್ನು ಕಾಯ್ದಿರಿಸಿದೆ.

**ಯಡಿಯೂರಪ್ಪ ಪರ ವಕೀಲರ ವಾದವೇನು?**

ಹೊಸದಾಗಿ ಪ್ರಕರಣವನ್ನು ಪರಿಗಣಿಸಲು ಹೈಕೋರ್ಟ್ ಸೂಚಿಸಿತ್ತು. ತನಿಖೆಯ ಎಲ್ಲಾ ಅಂಶಗಳನ್ನೂ ಪರಿಶೀಲಿಸಿ ಕಾಗ್ನಿಜೆನ್ಸ್ ಪಡೆಯಬೇಕಿತ್ತು. ಸಂತ್ರಸ್ತೆಯ ಹೇಳಿಕೆ ಬಿಟ್ಟು ಉಳಿದ ಸಾಕ್ಷ್ಯಗಳನ್ನು ಕೋರ್ಟ್ ಪರಿಗಣಿಸಿಲ್ಲ. ಯಡಿಯೂರಪ್ಪ ಮನೆಯಲ್ಲಿದ್ದ ಸಾಕ್ಷಿಗಳ ಹೇಳಿಕೆಯನ್ನು ಪರಿಗಣಿಸಿಲ್ಲ. ಆಡಿಯೋ ರೆಕಾರ್ಡಿಂಗ್ ಅನ್ನೂ ನ್ಯಾಯಾಲಯ ಪರಿಗಣಿಸಿಲ್ಲ. ಹೊಸದಾಗಿ ಕಾಗ್ನಿಜೆನ್ಸ್ ಪಡೆದಿರುವ ಆದೇಶ ಸರಿಯಿಲ್ಲವೆಂದು ಯಡಿಯೂರಪ್ಪ ಪರ ಹಿರಿಯ ವಕೀಲ ಸಿವಿ ನಾಗೇಶ್ ವಾದ ಮಂಡಿಸಿದರು.

**ಹೈಕೋರ್ಟ್ ಪೀಠ ಹೇಳಿದ್ದೇನು?**

ಇದು ರದ್ದುಪಡಿಸಬೇಕಾದ ಪ್ರಕರಣವೆಂದು ಮನವರಿಕೆಯಾಗಿಲ್ಲ. ಆದರೆ ಕಾಗ್ನಿಜೆನ್ಸ್ ಪಡೆದ ವಿಧಾನದ ಬಗ್ಗೆ ಪ್ರಶ್ನೆಗಳಿವೆ ಎಂದು ಹೈಕೋರ್ಟ್ ಹೇಳಿದೆ.

**ರಾಜ್ಯ ಸರ್ಕಾರದ ಪರ ವಕೀಲರ ವಾದವೇನು?**

ರಾಜ್ಯ ಸರ್ಕಾರದ ಪರ ಎಸ್‌ಪಿಪಿ ಪ್ರೊ.ರವಿವರ್ಮ ಕುಮಾರ್ ವಾದ ಮಂಡನೆ ಮಾಡಿ, ಕೊಠಡಿಯಲ್ಲಿ ಲಾಕ್ ಮಾಡಿಕೊಂಡಿದ್ದರಿಂದ ಸಂತ್ರಸ್ತೆ ಹೇಳಿಕೆಯೇ ಮುಖ್ಯ. ಯಡಿಯೂರಪ್ಪ ಸೂಚನೆ ಮೇರೆಗೆ ಮೊಬೈಲ್‌ನಲ್ಲಿದ್ದ ವಿಡಿಯೋ ಡಿಲೀಟ್ ಮಾಡಲಾಗಿದೆ. ಮೊಬೈಲ್ ರೆಕಾರ್ಡಿಂಗ್ ನಲ್ಲಿರುವುದು ಯಡಿಯೂರಪ್ಪ ಧ್ವನಿ ಎಂಬ ಬಗ್ಗೆ ಎಫ್‌ಎಸ್ ಎಲ್ ವರದಿಯಿದೆ. ಫಿರ್ಯಾದಿ ಮಹಿಳೆಗೆ ಬ್ಯಾಗ್‌ನಲ್ಲಿ 2 ಲಕ್ಷ ರೂಪಾಯಿ ಹಣ ನೀಡಲಾಗಿದೆ. ನಡೆದ ಘಟನೆಯನ್ನು ಬಾಲಕಿಯೇ ವಿವರಿಸಿದ್ದಾಳೆಂದರು. ವಾದ-ಪ್ರತಿವಾದ ಆಲಿಸಿದ ನ್ಯಾಯಪೀಠ ಅಂತಿಮವಾಗಿ ಆದೇಶ ಕಾಯ್ದಿರಿಸಿದೆ.

**ಯಡಿಯೂರಪ್ಪ ವಿರುದ್ಧ ಪೋಕ್ಸೋ ಕೇಸ್: ಏನಿದು ಪ್ರಕರಣ?**

ಯಡಿಯೂರಪ್ಪ 17 ವರ್ಷದ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂಬ ಆರೋಪ 2024 ರ ಮಾರ್ಚ್ ನಲ್ಲಿ ಕೇಳಿಬಂದಿತ್ತು. ಸಂತ್ರಸ್ತೆಯ ತಾಯಿ ಈ ಆರೋಪ ಮಾಡಿದ್ದರು. ಬಳಿಕ ಯಡಿಯೂರಪ್ಪ ವಿರುದ್ಧ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೋಕ್ಸೊ) ಕಾಯ್ದೆಯಡಿ ಬೆಂಗಳೂರಿನ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು. ಪ್ರಕರಣದ ಗಂಭೀರತೆ ಪರಿಗಣಿಸಿ ಸರ್ಕಾರವು ಸಿಐಡಿಗೆ ವರ್ಗಾವಣೆ ಮಾಡಿತ್ತು. ಸಿಐಡಿ ಅಧಿಕಾರಿಗಳು ಯಡಿಯೂರಪ್ಪ ಅವರಿಗೆ ನೋಟಿಸ್ ನೀಡಿ, ವಿಚಾರಣೆಗೆ ಹಾಜರಾಗಲು ಸೂಚಿಸಿದ್ದರು. ಅದರಂತೆ ಯಡಿಯೂರಪ್ಪ ವಿಚಾರಣೆಗೆ ಹಾಜರಾಗಿ ತಮ್ಮ ಹೇಳಿಕೆಗಳನ್ನು ನೀಡಿದ್ದರು.

ಪುಟ 2ಕ್ಕೆ...

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

